ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1942 (1677)
ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು
ಉತ್ತರಿಸುವ ದಿನಾಂಕ : 23.03.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಬೀದರ್ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲಾಗುವುದು; ಅವುಗಳ ಸ್ಥಾಪನೆಗೆ ಸ್ಥಳ ಗುರುತಿಸಲಾಗಿದೆಯೇ;	ಸರ್ಕಾರವು ಸ್ವಂತವಾಗಿ ಯಾವುದೇ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವುದಿಲ್ಲ. ಖಾಸಗಿ ಕಂಪನಿಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜಿಸಲು ಹೊಸ ಕೈಗಾರಿಕಾ ನೀತಿ 2020–25 ರಲ್ಲಿ ರಿಯಾಯಿತಿ ಹಾಗೂ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಖಾಸಗಿ ಕೈಗಾರಿಕೆಗಳಿಗೆ ಬೇಕಾಗಿರುವ ಜಮೀನಿಗೋಸ್ಕರ ಕೆಐಎಡಿಬಿಯು ನೌಬಾದ್, ಕೋಳಾರ್ ಹಂತ–1 & ಹಂತ–2, ಹುಮನಾಬಾದ್ ಮತ್ತು ಬಸವಕಲ್ಯಾಣಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿದೆ.
ಆ	ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೃಷಿ ಆಧಾರಿತ ಕಾರ್ಖಾನೆಗಳು ಸ್ಥಾಪನೆ ಆಗದಿರಲು ಕಾರಣಗಳೇನು; ಇದಕ್ಕೆ ಸರ್ಕಾರ ಉತ್ತೇಜನ ನೀಡದಿರಲು ಕಾರಣಗಳೇನು?	ಸರ್ಕಾರವು ಕೃಷಿ ಆಧಾರಿತ ಸ್ಥಾಪನೆಗಾಗಿ ಕರ್ನಾಟಕ ಕೃಷಿ ವಾಣಿಜ್ಯ ಮತ್ತು ಆಹಾರ ಸಂಸ್ಕರಣಾ ನೀತಿ 2015ನ್ನು ಜಾರಿಗೆ ತಂದಿದೆ. ಇದರ ಮುಖಾಂತರ ಸಾಕಷ್ಟು ಕೈಗಾರಿಕೆಗಳಿಗೆ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಕಲ್ಯಾಣ ಕರ್ನಾಟಕ ಭಾಗದಲ್ಲಿ ನೀಡಲಾಗಿರುತ್ತದೆ.

ಸಿಐ 120 ಎಸ್‌ಪಿಐ 2021

(ಜಗದೀಶ್ ಶೆಟ್ಟರ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು